ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020-21 :** **ಜುಲೈ 21, 2020**

## ಪತ್ರಿಕಾ ಆಮಂತ್ರಣ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಗೋವಿಂದರಾಜ ನಗರ ವಿಧಾನಸಭಾ ಕ್ಷೇತ್ರದಲ್ಲಿನ ಯುನಾನಿ ಆಸ್ಪತ್ರೆಯಲ್ಲಿ ಪ್ರಾರಂಭಿಸಿರುವ ಕೋವಿಡ್ ಕೇರ್ ಸೆಂಟರ್ ಉದ್ಘಾಟನೆ ಸಮಾರಂಭ.

ಡಾ.ಕೆ. ಸುಧಾಕರ್, ವೈದ್ಯಕೀಯ ಶಿಕ್ಷಣ ಸಚಿವರು.

ವಿ.ಸೋಮಣ್ಣ, ವಸತಿ ಹಾಗೂ ಪೂರ್ವವಲಯದ ಉಸ್ತುವಾರಿ ಸಚಿವರು.

**ದಿನಾಂಕ: 22-07-2020, ಬುಧವಾರ, ಸಮಯ: ಬೆಳಿಗ್ಗೆ 10-00 ಗಂಟೆಗೆ**

**ಸ್ಥಳ: ಯುನಾನಿ ಆಸ್ಪತ್ರೆ, ಗೋವಿಂದರಾಜ ನಗರ,** ಬೆಂಗಳೂರು.

ವಿ.ಸೂ- ಹೆಚ್ಚಿನ ಮಾಹಿಗಾಗಿ ವಸತಿ ಸಚಿವರ ಮಾಧ್ಯಮ ಮುಖ್ಯಸ್ಥರಾದ ಶ್ರೀ ದುರ್ಗೇಶ್ 9845544674 ಇವರನ್ನು ಸಂಪರ್ಕಿಸಬಹುದಾಗಿದೆ.

## ಪತ್ರಿಕಾ ಪ್ರಕಟಣೆ

ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳ ದಾಳಿ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ):

ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕು, ವಡ್ಡರಹಟ್ಟಿ ಕ್ಯಾಂಪ್‌ನ ನಿವಾಸಿಯೊಬ್ಬರು ತಮ್ಮ ತಂದೆಯ ಹೆಸರನ್ನು ಖಾತಾ ಉತಾರೆಯಲ್ಲಿ ನಮೂದಿಸಲು ಸಹಾಯಕ ಆಯುಕ್ತರು, ಕೊಪ್ಪಳ ಜಿಲ್ಲೆ ರವರಿಗೆ ಅರ್ಜಿ ಸಲ್ಲಿಸಿಕೊಂಡಿರುತ್ತಾರೆ. ಸಹಾಯಕ ಆಯುಕ್ತರ ಆದೇಶದ ಮೇರೆಗೆ ಫಿರ್ಯಾದುದಾರರ ತಂದೆಯ ಹೆಸರನ್ನು ಖಾತಾ ಉತಾರೆಯಲ್ಲಿ ನಮೂದಿಸಲು ಆರೋಪಿತರಾದ ಶ್ರೀ. ಶರಣಪ್ಪ, ಶಿರಸ್ತೆದಾರರು, ಭೂಮಿ ಕೇಂದ್ರ, ತಾಲ್ಲೂಕು ಕಛೇರಿ, ಗಂಗಾವತಿ ಮತ್ತು ಶ್ರೀ. ಚಂದ್ರಕಾಂತ್, ತಹಶೀಲ್ದಾರರು, ಗಂಗಾವತಿ ತಾಲ್ಲೂಕು

ರವರು ಫಿರ್ಯಾದುದಾರರ ತಂದೆಯ ಹೆಸರನ್ನು ಖಾತಾ ಉತಾರೆಯಲ್ಲಿ ನಮೂದಿಸುವ ಸಲುವಾಗಿ ರೂ. 6,000/- ರೂ ಲಂಚದ ಹಣವನ್ನು ಕೊಡುವಂತೆ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ಈ ಬಗ್ಗೆ ಆಪಾದಿತ ಸರ್ಕಾರಿ ನೌಕರರಾದ ಶ್ರೀ. ಶರಣಪ್ಪ, ಶಿರಸ್ತೆದಾರರು, ಭೂಮಿ ಕೇಂದ್ರ, ತಾಲ್ಲೂಕು ಕಛೇರಿ, ಗಂಗಾವತಿ ಮತ್ತು ಶ್ರೀ. ಚಂದ್ರಕಾಂತ್, ತಹಶೀಲ್ದಾರರು, ಗಂಗಾವತಿ ತಾಲ್ಲೂಕು ರವರು ಲಂಚದ ಹಣದ ಬೇಡಿಕೆ ಇಟ್ಟ ಬಗ್ಗೆ ಖಚಿತಪಡಿಸಿಕೊಂಡು, ಲಂಚದ ಹಣವನ್ನು ನೀಡಲು ಇಷ್ಟವಿಲ್ಲದ ಕಾರಣ ಪಿರ್ಯಾದುದಾರರು ಭ್ರಷ್ಟಾಚಾರ ನಿಗ್ರಹ ದಳ, ಕೊಪ್ಪಳ ಜಿಲ್ಲಾ ಠಾಣೆಗೆ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.

ಈ ದೂರಿನನ್ವಯ ದಿನಾಂಕ: 20.07.2020 ರಂದು ನಡೆಸಿದ ಟ್ರ್ಯಾಪ್ ಕಾರ್ಯಾಚರಣೆಯಲ್ಲಿ ಶ್ರೀ. ಶರಣಪ್ಪ, ಶಿರಸ್ತೆದಾರರು, ಭೂಮಿ ಕೇಂದ್ರ, ತಾಲ್ಲೂಕು ಕಛೇರಿ, ಗಂಗಾವತಿ ಮತ್ತು ಶ್ರೀ. ಚಂದ್ರಕಾಂತ್, ತಹಶೀಲ್ದಾರರು, ಗಂಗಾವತಿ ತಾಲ್ಲೂಕು ರವರು ರೂ. 6,000/- ಲಂಚದ ಹಣವನ್ನು ಪಿರ್ಯಾದುದಾರರಿಂದ ಪಡೆದುಕೊಂಡಿದ್ದು, ಕೊಪ್ಪಳ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿದ್ದು, ಲಂಚದ ಹಣದ ಸಮೇತ ಆರೋಪಿತರನ್ನು ವಶಕ್ಕೆ ಪಡೆದು, ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಂಡು ದಿನಾಂಕ: 20.07.2020 ರಂದು ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಪ್ರಕರಣದ ತನಿಖೆ ಮುಂದುವರೆದಿದೆ.

## ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ

## ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ):

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ವತಿಯಿಂದ 2020-21ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ ಅಂಬಿಗ ಮತ್ತು ಉಪಜಾತಿಗೆ ಸೇರಿದ ಸಾಲ ಸೌಲಭ್ಯ ಪಡೆಯಲು ಬಯಸುವವರಿಂದ ವಿವಿಧ ಯೋಜನೆಗಳಡಿ  ಸಾಲ ಸೌಲಭ್ಯ ಒದಗಿಸಲು ಅರ್ಜಿಗಳನ್ನು ಆಹ್ವಾನಿಸಿದೆ.

ಅಂಬಿಗ ಹಾಗೂ ಅದರ ಉಪಜಾತಿಗೆ ಸೇರಿದ ಕೋಲಿ, ಗಂಗಾಮತ, ಬೆಸ್ತ, ಕಬ್ಬಲಿಗ, ಮೊಗವೀರ, ಅಂಬಿಗ/ಅಂಬಿ, ಬಾರ್ಕಿ/ಬಾರಿಕ, ಬೆಸ್ತರ್, ಭೋಯಿ, ರಾಜಬೋಯಿ, ಬುಂಡೆ-ಬೆಸ್ತರ್, ದಾಲ್ಜಿ, ದಾವತ್, ಗಬಿಟ್, ಗಲಾಡಕೊಂಕಣಿ, ಗಂಗೆಮಕ್ಕಳು, ಗಂಗಾಕುಲ, ಗಂಗಾಮತಸ್ಥ, ಗಂಗಾಪುತ್ರ, ಗೌರಿಮತ, ಬುಂಡೆ-ಬೆಸ್ತ/ಗುಂಡೆಬೆಸ್ತ, ಹರಕಂತ್ರ, ಜಲಗಾರ, ಕಬ್ಬೇರ/ಕಬ್ಬೇರ್, ಕಬ್ಬಿಲಿ, ಕಹರ್, ಖಾರ್ವಿ/ಕೊಂಕಣಖಾರ್ವಿ, ಕೋಳಿಮಹದೇವ್, ಮಡ್ಡರ್, ಮೀನಗಾರ್, ಮಗೇರ್, ಮುಕ್ಕವಾನ್, ಪರಿವಾರ, ಸಿವಿಯರ್, ಸುಣಗಾರ,

ತೊರೆಯ, ವಾಗಿ ಜಾತಿಗೆ ಸೇರಿದ ಜನರ ಆರ್ಥಿಕ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯ ಪಡೆಯಲು ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಅಂಬಿಗ ಮತ್ತು ಅದರ ಉಪಜಾತಿಗೆ ಸೇರಿದ ಫಲಾಪೇಕ್ಷಿಗಳು ಅರ್ಜಿಯನ್ನು ವೆಬ್ ಸೈಟ್ https:ambigaradevelopment.karnataka.gov.in ನಲ್ಲಿ ಹಾಗೂ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಬಿವೃದ್ಧಿ ನಿಗಮ, ಬೆಂಗಳೂರು ದಕ್ಷಿಣ ಜಿಲ್ಲಾ ಕಛೇರಿಯಲ್ಲಿ ಪಡೆಯಬಹುದಾಗಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ದಿ:12-08-2020 ರೊಳಗೆ ಸಲ್ಲಿಸುವುದು.

ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆನ್‌ಲೈನ್‌ನಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ:12-08-2020

ಒಂದು ಬಾರಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು. ಕೋಲಿ, ಗಂಗಾಮತ, ಬೆಸ್ತ, ಕಬ್ಬಲಿಗ, ಮೊಗವೀರ ಮತ್ತು ಇದರ ಉಪಜಾತಿಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಒಳಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಕರ್ನಾಟಕ ರಾಜ್ಯದ ಖಾಯಂ ವಾಸಿಯಾಗಿರಬೇಕು. ಅರ್ಜಿದಾರರು ಕೆ.ವೈ.ಸಿ. ಬಗ್ಗೆ ಆಧಾರ್ ಕಾರ್ಡ್/ಚುನಾವಣಾ ಗುರುತಿನ ಚೀಟಿ/ಪಾನ್ ಕಾರ್ಡ್ ದಾಖಲೆಗಳನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಸಲ್ಲಿಸಬೇಕು. (ಅರ್ಜಿದಾರರು ಐ.ಎಫ್.ಎಸ್.ಸಿ.ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್‌ಗಳಲ್ಲಿ ಖಾತೆ ಹೊಂದಿರಬೇಕು.

**ಯೋಜನೆಗಳು:**

ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ: ವ್ಯಾಪಾರ, ಕೈಗಾರಿಕೆ, ಸಾರಿಗೆ ಮತ್ತು ಸೇವಾವಲಯಗಲ್ಲಿ ಹೆಚ್ಚಿನ ಘಟಕ ವೆಚ್ಚವಿರುವ ಉದ್ಯಮಗಳಾದ ಆಟೋರಿಕ್ಷಾ, ಬೇಕರಿ, ಹೋಟೆಲ್, ಕಂಪ್ಯೂಟರ್ ಘಟಕ, ಹಿಟ್ಟಿನ ಗಿರಣಿ, ಆಟೋಮೊಬೈಲ್ ಗ್ಯಾರೇಜ್, ಮೊಬೈಲ್ ರಿಪೇರಿ ಅಂಗಡಿ, ಇಟ್ಟಿಗೆ ಉದ್ಯಮ ಇತ್ಯಾದಿ ಹೆಚ್ಚಿನ ಘಟಕ ವೆಚ್ಚವಿರುವ ಲಾಭದಾಯಕ ಉದ್ಯಮಗಳಾದ ಸ್ಥಾಪಿಸಿ ನಡೆಸಲು ಬ್ಯಾಂಕ್

ಗಳಿಂದ ಸಾಲ ಮತ್ತು ನಿಗಮದಿಂದ ಸಹಾಯಧನ ಒದಗಿಸಲು ಚೈತನ್ಯ ಸಬ್ಸಿಡಿ ಕಂ–ಸಾಫ್ಟ್ ಲೋನ್ ಯೋಜನೆ ರೂಪಿಸಿದೆ.

**ಸ್ವಯಂ ಉದ್ಯೋಗ ಸಾಲ ಯೋಜನೆ:** ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆ ಅನುಸಾರ ಗರಿಷ್ಠ ರೂ.50,000/–ಗಳ ವರೆಗೆ ಆರ್ಥಿಕ ನೆರವು. ಘಟಕ ವೆಚ್ಚ ರೂ.50,000/–ಗಳಿಗೆ ಶೇ.30ರಷ್ಟು ಗರಿಷ್ಠ ರೂ.10,000/–ಗಳ ಸಹಾಯಧನ ಉಳಿಕೆ ಶೇ.70ರಷ್ಟು ರೂ.40,000/–ಗಳನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಸಾಲ.

**ಸ್ವ–ಸಹಾಯ ಗುಂಪುಗಳಿಗೆ ಸಾಲ ಯೋಜನೆ:** ಸ್ವ–ಸಹಾಯ ಗುಂಪುಗಳ ಸದಸ್ಯರು ಕೈಗೊಳ್ಳುವ ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರದ ಚಟುವಟಿಕೆಗಳಿಗೆ ಅಂದರೆ ಹಣ್ಣು, ತರಕಾರಿ ಮಾರುವವರು ಹಾಲು ಮಾರುವವರು, ಹೂ ಮಾರುವವರು, ತಳ್ಳುವ ಗಾಡಿ ವ್ಯಾಪಾರಿಗಳು ಮುಂತಾದ ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳಿಗೆ ಸ್ವ–ಸಹಾಯ ಗುಂಪುಗಳ 15 ಸದಸ್ಯರಿಗೆ ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಗರಿಷ್ಠ ರೂ.10,000/–ಸಾಲ ಹಾಗೂ 5,000/–ಗಳ ಸಹಾಯಧನ.

**ಅರಿವು ಶೈಕ್ಷಣಿಕ ಸಾಲ ಯೋಜನೆ:** ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಕೋರ್ಸ್‌ನ ವಾಸ್ತವಿಕ ವೆಚ್ಚ ಅಥವಾ ವಾರ್ಷಿಕ ಗರಿಷ್ಠ ರೂ.1.00ಲಕ್ಷಗಳಂತೆ ಶೇ.2ರ ಬಡ್ಡಿದರದಲ್ಲಿ ಸಾಲ. ವಿದ್ಯಾರ್ಥಿಗಳು ಸಿ.ಇ.ಟಿ ಮೂಲಕ ಅಥವಾ ಮೆರಿಟ್ ಆಧಾರದ ಮೇಲೆ ಸೀಟ್ ಪಡೆದು ಈ ಕೆಳಕಂಡ ಕೋರ್ಸ್‌ಗಳಲ್ಲಿ ವ್ಯಾಸಾಂಗ ಮಾಡುತ್ತಿರುಬೇಕು ಹಾಗೂ ಕುಟುಂಬದ ವಾರ್ಷಿಕ ವರಮಕಾನ ರೂ.3.50 ಲಕ್ಷಗಳ ಮಿತಿಯಲ್ಲಿರಬೇಕು. ವ್ಯಾಸಂಗದ ಕೋರ್ಸ್‌ಗಳು: ಬಿ.ಇ, ಎಂ.ಬಿ.ಬಿ.ಎಸ್, ಬಿ.ಯೂ.ಎಂ.ಎಸ್, ಬಿ.ಡಿಎಸ್, ಬಿ.ಎ.ಎಂ.ಎಸ್, ಬಿ.ಎಚ್.ಎಂ.ಎಸ್, ಎಂ.ಬಿ.ಎ, ಎಂ.ಟೆ.ಕ್, ಎಂಇ, ಎಂಡಿ, ಪಿ.ಹೆಚ್.ಡಿ, ಬಿ.ಸಿ.ಎ/ಎಂ.ಸಿ.ಎ, ಎಂ.ಎಸ್.ಅಗ್ರಿಕಲ್ಚರ್, ಬಿ.ಎಸ್.ಸಿ ನರ್ಸಿಂಗ್, ಬಿ.ಫಾರಂ/ಎಂ.ಫಾರಂ, ಬಿಎಸ್.ಸಿ ಪ್ಯಾರಾಮೆಡಿಕಲ್, ಬಿ.ಎಸ್.ಸಿ (ಬಯೋ ಟೆಕ್ನಾಲಜಿ), ಬಿ.ಟೆಕ್, ಬಿ.ಪಿ.ಟಿ, ಬಿ.ವಿ.ಎಸ್.ಸಿ/ಎಂ.ವಿ.ಎಸ್.ಸಿ, ಬಿ.ಎನ್.ಎಂ, ಬಿ.ಹೆಚ್.ಎಂ, ಎಂ.ಡಿ.ಎಸ್, ಎಂ.ಎಸ್.ಡಬ್ಲ್ಯು, ಎಲ್.ಎಲ್.ಎಂ, ಎಂ.ಎಫ್.ಎ, ಎಂ.ಎಸ್.ಸಿ ಬಯೋ ಟೆಕ್ನಾಲಜಿ ಮತ್ತು ಎಂ.ಎಸ್.ಸಿ ಎಜಿ,  ಎಂ.ಕಾಂ, ಎಂ.ಎಸ್ಸಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಅರ್ಥಿಕ ಸಹಾಯ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ) :

ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿ ವಾಸವಿರುವ ಸವಿತಾ ಸಮಾಜಕ್ಕೆ ಸೇರಿದ ಪರಿಯಾಳ್, ಅಂಬಟ್ಟನ್, ಬಜಂತ್ರಿ, ಬಂಡಾರಿ, ಚೌರಿಯ, ಹಡಪದ, ಕವುಟಿಯನ್, ಕೆಲಸಿ, ಕ್ಷೌರದ್, ಮಹಾಲೆ, ಮಂಗಳ, ಮೇಲಗಾರ, ನಾಡಿಗ, ನಾಪಿತ, ನವಲಿಗ್, ನಾವಿ, ನಯನಜ ಕ್ಷತ್ರಿಯ, ನ್ಹಾವಿ, ವಾಜಾಂತ್ರಿ, ಸವಿತ, ನಯನಜ ಕ್ಷತ್ರಿ, ನಾಡಿಗ್, ಕ್ಷೌರಿಕ್, ಕ್ಷೌರಿಕ ಜನಗರ ಅರ್ಥಿಕ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಅನ್‌ಲೈನ್‌ನಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ 03–08–2020ರೊಳಗೆ ಸಲ್ಲಿಸುವುದು.

ಒಂದು ಬಾರಿ ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

1. ಸ್ವಯಂ ಉದ್ಯೋಗ ಸಾಲ ಯೋಜನೆ: ಸ್ವಯಂ ಉದ್ಯೋಗ ಕೈಗೊಳ್ಳಲು ಅರ್ಥಿಕ ಚಟುವಟಿಕೆ ಅನುಸಾರ ಗರಿಷ್ಠ ರೂ. 50,000/– ಗಳ ವರೆಗೆ ನೆರವು. ಘಟಕ ವೆಚ್ಚ ರೂ. 50,000/–ಗಳಿಗೆ ಶೇಕಡ 30 ರಷ್ಟುಯ ಗರಿಷ್ಠ ರೂ. 10,000/–ಗಳ ಸಹಾಯಧನ ಉಳಿಕೆ 70ರಷ್ಟು ರೂ. 40,000/–ಗಳನ್ನು ವಾರ್ಷಿಕ ಶೇಕಡ 4ರ ಬಡ್ಡಿ ದರದಲ್ಲಿ ಸಾಲ.

2. ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ : ಸವಿತಾ ಸಮಾಜಕ್ಕೆ ಸೇರಿದ ಜನರು ಸಾಂಪ್ರಾದಾಯಿಕ ವೃತ್ತಿದಾರರು ಅಥವಾ ಕುಲಕಸುಬುದಾರರು ತಮ್ಮ ವೃತ್ತಿಯ ಅಭಿವೃದ್ಧಿಗಾಗಿ ಆಧುನಿಕ ಉಪಕರಣಗಳನ್ನು ಖರೀದಿಸಲು ತಾಂತ್ರಿಕತೆಯನ್ನು ಮೇಲ್ದರ್ಜೆಗೇರಿಸಲು ವೃತ್ತಿ ಅನುಸಾರ ಗರಿಷ್ಠ ರೂ. 50,000/–ಗಳ ವರೆಗೆ ಆರ್ಥಿಕ ನೆರವು. ಘಟಕ ವೆಚ್ಚ ರೂ. 50,000/–ಗಳಿಗೆ ಶೇಕಡ 30 ರಷ್ಟು ಗರಿಷ್ಠ ರೂ. 10,000/–ಗಳ ಸಹಾಯಧನ ಉಳಿಕೆ ಶೇಕಡ 70ರಷ್ಟು ರೂ 40,000/–ಗಳನ್ನು ವಾರ್ಷಿಕ ಶೆಕಡ 2ರ ಬಡ್ಡಿದರದಲ್ಲಿ ಸಾಲ.

ಈ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಸವಿತಾ ಸಮಾಜಕ್ಕೆ ಸೇರಿದ ಫಲಾಪೇಕ್ಷಿಗಳು ಅರ್ಜಿಯನ್ನು ವೆಬ್‌ಸೈಟ್ www.dbcdc.karnataka.gov.in ನಲ್ಲಿ ಹಾಗೂ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು ದಕ್ಷಿಣ ಜಿಲ್ಲಾ ಕಚೇರಿಯಲ್ಲಿ ಪಡೆಯಬಹುದಾಗಿರುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

**ಕೋವಿಡ್ –19ರ ಸಮಯದಲ್ಲಿ ಪರಿಸರ ಸುಸ್ಥಿರತೆ ಹಾಗೂ ಸ್ಥಿತಿಸ್ಥಾಪಕತ್ವ ಕಾರ್ಯಕ್ರಮ ಆಯೋಜನೆ**

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ) :

ವಿಶ್ವವಿದ್ಯಾಲಯ ಕಾನೂನು ಕಾಲೇಜು ಬೆಂಗಳೂರು ವಿಶ್ವವಿದ್ಯಾಲಯ ಇವರ ವತಿಯಿಂದ ಅಂತರ್ರಾಷ್ಟ್ರೀಯ ಕಾರ್ಯಗಾರ ವಿಚಾರವಾದ ಕೋವಿಡ್ 19 ರ ಸಂದರ್ಭದಲ್ಲಿ ಪರಿಸರ ಸುಸ್ಥಿರತೆ ಹಾಗೂ ಸ್ಥಿತಿಸ್ಥಾಪಕತ್ವ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಕಾನೂನು ಆಯೋಗದ ಅಧ್ಯಕ್ಷರಾದ ಗೌರವಾನ್ವಿತ ಎಸ್.ಆರ್ . ಬನ್ನೂರುಮಠ ರವರು ಉದ್ಘಾಟಿಸಿದರು.

ಕೋವಿಡ್ 19ರ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ ಹಾಗೂ ಅದರ ಸಮತೋಲನ ಬಹಳ ಅತ್ಯಗತ್ಯ ಎಂದು ತಿಳಿಸುತ್ತಾ, ಇದರಿಂದ ಪರಿಸರದ ಮೇಲೆ ಧನಾತ್ಮಕ ಹಾಗೂ ಋಣಾತ್ಮಕ ಪರಿಣಾಮಗಳ ಆಗಿರುವುದನ್ನು ಗಮನಿಸಬಹುದು. ಧನಾತ್ಮಕವಾಗಿ ಮಾತನಾಡುವುದಾದರೆ ಪರಿಸರದ ಶಬ್ದ ಮಾಲಿನ್ಯ ಜಲ ಮಾಲಿನ್ಯ ಹಾಗೂ ಇನ್ನಿತರ ಮಾಲಿನ್ಯವನ್ನು ತಡೆಗಟ್ಟುವ ಪ್ರಯತ್ನವಾಗಿದೆ. ಆದರೆ ಋಣಾತ್ಮಕವಾದ ವಿಚಾರವೇನೆಂದರೆ, ಮಾಸ್ಕ್ ಕೈಚೀಲಗಳು ಹಾಗೂ ವೈದ್ಯಕೀಯ ತ್ಯಾಜ್ಯಗಳು ಹೆಚ್ಚಾಗುತ್ತದೆ. ರಾಜ್ಯ ಸರ್ಕಾರ ಕೋವಿಡ್ 19 ರ ಸಂದರ್ಭದಲ್ಲಿಪರಿಸರ ಸಂರಕ್ಷಣೆ ವಿಚಾರವಾಗಿ ಹೆಚ್ಚಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ಪರಿಸರವಾದಿಗಳಾದ ಎಲ್ಲಪ್ಪ ರೆಡ್ಡಿ ಅವರು ಮಾತನಾಡುತ್ತಾ ಕೋವಿಡ್ 19 ರ ಸಂದರ್ಭದಲ್ಲಿ ಪರಿಸರದ ಸ್ಥಿತಿಸ್ಥಾಪಕತ್ವವನ್ನು ಕಾಯ್ದುಕೊಳ್ಳಲು ಹಲವಾರು ಕ್ರಮಗಳನ್ನು ತೆಗೆದುಕೊಳ್ಳಬೇಕು. ಪರಿಸರ ಕಾನೂನುಗಳು ಹಾಗೂ ಪಾಲಿಸಿಗಳನ್ನು ಅನುಷ್ಠಾನ ಕ್ರಮಬದ್ದವಾಗಿ ಆಗಬೇಕು ಎಂದು ತಿಳಿಸಿದರು.

ಪ್ರೊ. ವೇಣುಗೋಪಾಲ್ ರವರು ಮಾತನಾಡುತ್ತಾ ನಮ್ಮಲ್ಲಿ ಹಲವಾರು ಪರಿಸರ ಕಾನೂನುಗಳಿದ್ದು ಅವುಗಳ ಪರಿಣಾಮಕಾರಿ ಅನುಷ್ಠಾನಗಳ ಆಗಬೇಕಾಗಿದೆ. ವಾಯುಮಾಲಿನ್ಯ ಜಲಮಾಲಿನ್ಯ ಶಬ್ದಮಾಲಿನ್ಯ ಕೈಗಾರೀಕರಣ ನಗರೀಕರಣ ನ್ಯೂಕ್ಲಿಯರ್ ಸಂಬಂಧಪಟ್ಟ ವಿಚಾರಗಳೆಲ್ಲವೂ ಪರಿಸರ ಸಂರಕ್ಷಣೆಗೆ ವಿರುದ್ದವಾಗಿದೆ.

ಈ ಕೋವಿಡ್ 19ರ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಯ ವಿಚಾರದಲ್ಲಿ ಹಲವಾರು ಬದಲಾವಣೆಗಳು ಕಂಡು ಬಂದಿದ್ದು, ಈ ಮೂಲಕ ಪ್ಲಾಸ್ಟಿಕ್ ಬರಾಟೆ ಕಡಿಮೆಯಾಗಿದೆ ಜಲಮಾಲಿನ್ಯ ಶಬ್ದಮಾಲಿನ್ಯ ವಾಯುಮಾಲಿನ್ಯ ಬಹಳ ನಿಯಂತ್ರಣದಲ್ಲಿದೆ. ಈ ರೀತಿಯ ಕಾರ್ಯಕ್ರಮಗಳು ಬಹಳ ಉಪಯುಕ್ತವಾಗಿದೆ ಎಂದು ತಿಳಿಸುತ್ತಾ ಪರಿಸರವನ್ನು ಸಂರಕ್ಷಿಸಿದರೆ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವುದಲ್ಲದೆ ಮುಂದಿನ ಭವಿಷ್ಯವನ್ನು ಕಾಪಾಡಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರದ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಧಾನ ಕಾರ್ಯದರ್ಶಿಗಳಾದ ವಿಜಯ್ ಕುಮಾರ್ ಗೋಗಿ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಮಾಜಿ ಕುಲಪತಿಗಳಾದ ಪ್ರೊ. ಟಿ .ಆರ್. ಸುಬ್ರಮಣ್ಯರವರು ಹಾಗೂ ಅಮೆರಿಕದಲ್ಲಿ ವಾಸವಾಗಿರುವ

ಪರಿಸರವಾದಿಗಳಾದ ಮೂರ್ತಿ ಸುಧಾಕರ್ , ಪ್ರೊ. ಸುರೇಶ್ ವಿ.ನಾಡಗೌಡ ಪ್ರಾಂಶುಪಾಲರು, ಪ್ರೊ. ವಿ ಸುದೇಶ್, ಮಾಜಿ ಡೀನರ್, ಪ್ರೊಫೆಸರ್ ದಶರಥ ಅಧ್ಯಕ್ಷರು ಕಾನೂನು ಅಧ್ಯಯನ ವಿಭಾಗ, ಡಾ. ಚಂದ್ರಕಾಂತಿ ಹಾಗೂ ಎಲ್ಲಾ ಪ್ರಾಧ್ಯಾಪಕರುಗಳು ಉಪಸ್ಥಿತರಿದ್ದರು ಎಂದು ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ) :

ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ದಿನಾಂಕ: 22-07-2020ರಂದು ಹಾಸನ ಜಿಲ್ಲೆಯ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂದಿರುಗುವರು ಎಂದು ಪ್ರಕಟಣೆ ತಿಳಿಸಿದೆ.